## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಸೋಮಣ್ಣ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊರಟಗೆರೆ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಗೆ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ –ಆದೇಶ.

**ಓದಲಾಗಿದೆ:**

| | |
|---|---|
| 1. | ನಿಬಂಧಕರು ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅ.ಸ.ಪ.ಸಂಖ್ಯೆ:ಕಂಪ್ಲೇಟ್/ಉಪಲೋಕ್/ಬಿಡಿ-4038/2014/ ಎಆರ್‌ಎಲ್ಒ-3, ದಿನಾಂಕ:16.6.2017 |
| 2. | ಮಾನ್ಯ ಉಪ ಲೋಕಾಯುಕ್ತರವರ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ವರದಿ ಸಂಖ್ಯೆ: ಕಂಪ್ಲೇಟ್/ಉಪಲೋಕ್/ಬಿಡಿ-4038/2014/ ಎಆರ್‌ಎಲ್ಒ-3, ದಿನಾಂಕ:25.5.2017 |

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:16.6.2017 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಯುಕ್ತರವರ ದಿನಾಂಕ:25.5.2017 ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಪರಿಶೀಲಿಸಲಾಗಿ, ಶ್ರೀ ಎನ್.ಮಲ್ಲಿಕಾರ್ಜುನ ಬಿನ್ ನಾರಾಯಣಪ್ಪ, ದಾಮುಗಳಯ್ಯನ ಪಾಳ್ಯ, ಕೊರಟಗೆರೆ ತಾಲ್ಲೂಕುರವರು ಶ್ರೀ ಎಂ.ಸೋಮಣ್ಣ, ಹಿಂದಿನ ಸ.ಕಾ.ಇಂ, ಪಂ.ರಾ.ಇಂ ಉಪವಿಭಾಗ, ಕೊರಟಗೆರೆ ಇವರ ವಿರುದ್ಧ ಲೋಕಾಯುಕ್ತ ಕಛೇರಿಗೆ ದೂರನ್ನು ಸಲ್ಲಿಸಿ, ಕೊರಟಗೆರ ಪಂ.ರಾ.ಇಂ ಉಪವಿಭಾಗದಲ್ಲಿ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಲ್ಲಿ ಮಂಜೂರಾಗಿರುವ ಕಾಮಗಾರಿಯಾದ ರಾಯವಾರದಿಂದ ಬೈರನಹಳ್ಳಿ ರಸ್ತೆ ನಿರ್ಮಾಣ ಮಾಡಲು ಎಸ್.ಸಿ.ಪಿ ಯೋಜನೆಯಡಿ ಹಣ ಬಿಡುಗಡೆಯಾಗಿದ್ದು ಸದರಿ ಕಾಮಗಾರಿಯಲ್ಲಿ ಅವ್ಯವಹಾರವಾಗಿರುತ್ತದೆ ಎಂದು ಆರೋಪಿಸಿರುತ್ತಾರೆ.

ಸದರಿ ದೂರಿನ ಕುರಿತು ಮಾನ್ಯ ಉಪಲೋಕಾಯುಕ್ತರು ಶ್ರೀ ಎಂ.ಸೋಮಣ್ಣ ಇವರಿಂದ ವಿವರಣೆ ಪಡೆದಿದ್ದು, ಸದರಿಯವರು ತಮ್ಮ ವಿವರಣೆಯಲ್ಲಿ ಆರೋಪಗಳನ್ನು ನಿರಾಕರಿಸಿ, ಕಾಮಗಾರಿಯನ್ನು ನಿರ್ವಹಿಸಿರುವ ಬಗ್ಗೆ ತಿಳಿಸಿರುತ್ತಾರೆಂದು, ಲಭ್ಯವಿರುವ ದಾಖಲೆಗಳನ್ನು ಪರಿಶೀಲಿಸಿ, 2013-14 ನೇ ಸಾಲಿನ 13 ನೇ ಹಣಕಾಸು ರಸ್ತೆ ನಿರ್ವಹಣಾ ಕ್ರಿಯಾ ಯೋಜನೆಯಲ್ಲಿ ಎಸ್.ಸಿ.ಪಿ ಮತ್ತು ಎಸ್.ಟಿ.ಪಿಗೆ ಸಂಬಂಧಪಟ್ಟಂತೆ ರಾಯವಾರದಿಂದ ಬೈರೇನಹಳ್ಳಿ ರಸ್ತೆ ನಿರ್ವಹಣೆಗೆ ರೂ.4.00 ಲಕ್ಷ ಗಳಿಗೆ ಡಾಂಬರೀಕರಣ ರಸ್ತೆಯನ್ನು ನಿರ್ಮಿಸಲು ಅನುಮೋದನೆಯಾಗಿದ್ದು, ಸದರಿ ರಸ್ತೆಯನ್ನು ಜಿ.ಎಂ.ಕಾಮರಾಜ ಗುತ್ತಿಗೆದಾರರಿಂದ ಅನುಷ್ಠಾನ ಮಾಡಲು ಅನುಮೋದನೆ ನೀಡಲಾಗಿದೆ. ಅದರೆ ಸದರಿ ಕಾಮಗಾರಿಯು ಅನುಷ್ಠಾನಗೊಂಡಿರುವ ಬಗ್ಗೆ ಯಾವುದೇ ದಾಖಲೆಗಳು ಇರುವುದಿಲ್ಲವೆಂದು, ಸದರಿ ಕಾಮಗಾರಿಯು ನಿರ್ಮಾಣಗೊಂಡಿರುವ ಬಗ್ಗೆ ಅಳತೆ ಪುಸ್ತಕ, ನಿರ್ವಹಿಸಿದ ಕೂಲಿ ಕಾರರ ಹೆಸರು ವೇತನ ಪಾವತಿಸಿರುವ ಬಗ್ಗೆ ದಾಖಲೆಗಳಿರುವುದಿಲ್ಲವೆಂದು, ಸದರಿ ಕಾಮಗಾರಿಗೆ ಹಣ ಖರ್ಚು ಮಾಡಿರುವ ಬಗ್ಗೆ ಯಾವುದೇ ದಾಖಲೆಗಳು ಹಾಗೂ ಸದರಿ ಕಾಮಗಾರಿಗೆ ಕಚ್ಚಾ ವಸ್ತುಗಳನ್ನು ಖರೀದಿಸಿರುವ ಬಿಲ್ ಇರುವುದಿಲ್ಲವೆಂದು, ಹಾಗಾಗಿ ಆರೋಪಿತರು ಕಾಮಗಾರಿಯನ್ನು ನಿರ್ವಹಿಸದೇ ಹಣ ದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆಯೆಂದು, ಆರೋಪಿತರು ಸರ್ಕಾರಿ ನೌಕರರಾಗಿದ್ದು,

---2

ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ 3(1) ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆಯೆಂದು, ಅವರು ನೀಡಿರುವ ವಿವರಣೆಯು ಶಿಸ್ತು ನಡವಳಿಯನ್ನು ಕೈ ಬಿಡಲು ಸೂಕ್ತ ಸಮಾಧಾನಕರವಾಗಿರುವುದಿಲ್ಲವೆಂದು ತಿಳಿಸಿ, ಆರೋಪಿತರು ದಿನಾಂಕ:31.12.2016 ರಂದು ನಿವೃತ್ತಿ ಹೊಂದಿರುವುದರಿಂದ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)(i) ರ ಅನುಸಾರ ಮಂಜೂರಾತಿ ನೀಡಿ, ಪ್ರಕರಣವನ್ನು ತಮ್ಮ ಸಂಸ್ಥೆಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತರು ಸರ್ಕಾರವನ್ನು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ಕಲಂ 12(3) ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಎಂ.ಸೋಮಣ್ಣ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊರಟಗೆರೆ ಇವರ ಉಸ್ತುವಾರಿಯಲ್ಲಿ ಕೊರಟಗೆರೆ ತಾಲ್ಲೂಕು ರಾಯವಾರದಿಂದ ಬೈರೇನಹಳ್ಳಿ ರಸ್ತೆ ಡಾಂಬರೀಕರಣ ಕಾಮಗಾರಿಯನ್ನು 2013-14 ನೇ ಸಾಲಿನ 13 ನೇ ಹಣಕಾಸು ರಸ್ತೆ ನಿರ್ವಹಣಾ ಕ್ರಿಯಾ ಯೋಜನೆಯಲ್ಲಿ ಎಸ್.ಸಿ.ಪಿ ಮತ್ತು ಎಸ್.ಟಿ.ಪಿ ಯೋಜನೆಯಲ್ಲಿ ಕೈಗೊಂಡು ಹಣ ಪಾವತಿಸಿರುವ ಬಗ್ಗೆ ಮಾಹಿತಿ ಇದ್ದರೂ, ಸದರಿ ಕಾಮಗಾರಿಯು ಅನುಷ್ಠಾನಗೊಂಡಿರುವ ಬಗ್ಗೆ ಯಾವುದೇ ದಾಖಲೆಗಳು ಇಲ್ಲದಿರುವುದರಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಿರುವುದು ಅನುಮಾನಸ್ಪದವಾಗಿರುತ್ತದೆ. ಇದರಿಂದಾಗಿ, ವೆಚ್ಚ ಮಾಡಿರುವ ಹಣವು ದುರುಪಯೋಗವಾಗಿರುವ ಸಾಧ್ಯತೆ ಇರುತ್ತದೆ. ಈ ರೀತಿಯಾಗಿ ಆರೋಪಿತರು ತಮ್ಮ ಕಾರ್ಯನಿರ್ವಹಣೆಯಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ ಹಾಗೂ ಪ್ರಾಮಾಣಿಕತೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಆದ್ದರಿಂದ, ಈ ಪ್ರಕರಣದಲ್ಲಿ ವಿವರವಾದ ಇಲಾಖೆ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಅದರಂತೆ, ಈ ಆದೇಶ.

**<u>ಆದೇಶ ಸಂಖ್ಯೆ:ಗ್ರಾಅಪ 74 ಇಎನ್‌ಕ್ಯೂ 17, ಬೆಂಗಳೂರು, ದಿನಾಂಕ:15.07.2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಎಂ.ಸೋಮಣ್ಣ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊರಟಗೆರೆ ಇವರು ದಿನಾಂಕ:31.12.2016 ರಂದು ವಯೋ ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ 1957ರ ನಿಯಮ 11 ರಂತೆ ನಡೆಸುವ ಸಲುವಾಗಿ ಸರ್ಕಾರವು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2) (ಬಿ)(i) ರನ್ವಯ ಮಂಜೂರಾತಿಯನ್ನು ನೀಡಿ, ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ 1957ರ ನಿಯಮ - 14(ಎ) ರಂತೆ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

15/07/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಎ.ಆರ್.ಎಲ್.ಓ-1, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
8. ಸಂಬಂಧಿಸಿದ ಅಧಿಕಾರಿ (ಲೋಕೋಪಯೋಗಿ ಇಲಾಖೆಯ ಮುಖಾಂತರ)
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
11. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.